


# ನೇಗಿಲಯೋಗಿ

## ಸಾಹಿತ್ಯ : ರಾಷ್ಟ್ರಕವಿ ಕುವೆಂಪು

ನೇಗಿಲ ಹಿಡಿದಾ ಹೊಲದೊಳು ಹಾಡುತ
ಉಳುವಾ ಯೋಗಿಯ ನೋಡಲ್ಲಿ
ಫಲವನು ಬಯಸದ ಸೇವೆಯೆ ಪೂಜೆಯು
ಕರ್ಮವೆ ಇಹಪರ ಸಾಧನವು
ಕಷ್ಟದೊಳನ್ನವ ದುಡಿವನೆ ತ್ಯಾಗಿ
ಶೃಷ್ಟಿನಿಯಮದೊಳಗವನೇ ಭೋಗಿ
ಉಳುವ ಯೋಗಿಯ ನೋಡಲಿ

ಲೋಕದೊಳೇನೇ ನಡೆಯುತಲಿರಲಿ
ತನ್ನೀ ಕಾರ್ಯವ ಬಿಡನೆಂದೂ
ರಾಜ್ಯಗಳುದಿಸಲಿ ರಾಜ್ಯಗಳಳಿಯಲಿ,
ಹಾರಲಿ ಗದ್ದುಗೆ ಮುಕುಟಗಳು
ಮುತ್ತಿಗೆ ಹಾಕಲಿ ಸೈನಿಕರೆಲ್ಲ
ಬಿತ್ತುಳುವುದನವ ಬಿಡುವುದೆ ಇಲ್ಲ
ಉಳುವಾ ಯೋಗಿಯ ನೋಡಲ್ಲಿ

ಯಾರು ಅರಿಯದ ನೇಗಿಲ ಯೋಗಿಯೆ
ಲೋಕಕೆ ಅನ್ನವನೀಯುವನು
ಹೆಸರು ಬಯಸದೆ ಅತಿ ಸುಖಕೆಳಸದೆ
ದುಡಿವನು ಗೌರವಕಾಶಿಸದೆ
ನೇಗಿಲಕುಳದೊಳಗಡಗಿದೆ ಕರ್ಮ
ನೇಗಿಲ ಮೇಲೆ ನಿಂತಿದೆ ಧರ್ಮ
ಉಳುವಾ ಯೋಗಿಯ ನೋಡಲಿ